CCE RR/PR/NSR/NSPR(B)/777/3051

**B**

# ಮಾರ್ಚ್/ಏಪ್ರಿಲ್ 2024 ರ ಪರೀಕ್ಷೆ - 1

# MARCH/APRIL 2024 EXAMINATION-1

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]
Total No. of Printed Pages : 12 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 38 ]
Total No. of Questions : 38 ]

**CCE RR/PR/NSR/NSPR**
**Reduced Syllabus**

Question Paper Serial No.

**ಸಂಕೇತ ಸಂಖ್ಯೆ : 33-K**
**Code No. : 33-K**

## ವಿಷಯ : ದ್ವಿತೀಯ ಭಾಷೆ — ಕನ್ನಡ

## Subject : Second Language — KANNADA

**(ಶಾಲಾ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಪುನರಾವರ್ತಿತ ಅಭ್ಯರ್ಥಿ / ಎನ್.ಎಸ್.ಆರ್. / ಎನ್.ಎಸ್.ಪಿ.ಆರ್.)**
**(Regular Repeater / Private Repeater / NSR / NSPR)**

ದಿನಾಂಕ : 06. 04. 2024 ] [ Date : 06. 04. 2024
ಸಮಯ : ಬೆಳಗ್ಗೆ 10-15 ರಿಂದ ಮಧ್ಯಾಹ್ನ 1-15 ರವರೆಗೆ ] [ Time : 10-15 A.M. to 1-15 P.M.
ಗರಿಷ್ಠ ಅಂಕಗಳು : 80 ] [ Max. Marks : 80

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

**Cut here/ಇಲ್ಲಿ ಕತ್ತರಿಸಿ** →

1. ಈ ಪ್ರಶ್ನೆಪತ್ರಿಕೆಯು ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ **ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ (ಬಾಣವನ್ನು ಅನುಸರಿಸಿ), ಎಡಬದಿ ಪಾರ್ಶ್ವವನ್ನು ಕತ್ತರಿಸಬೇಡಿ.** ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.
6. ನಿಮಗೆ ವಿತರಿಸಲಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ( Version ) ಮತ್ತು ನಿಮ್ಮ ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ಒಂದೇ ಆಗಿರುವುದನ್ನು ಖಾತರಿಪಡಿಸಿಕೊಳ್ಳಿ.

ಇಲ್ಲಿಂದ ಕತ್ತರಿಸಿ

06. 04. 2024

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**

KANNADA

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ :** **4 × 1 = 4**

1. 'ಸವರ್ಣದೀರ್ಘ ಸಂಧಿ'ಗೆ ಉದಾಹರಣೆಯಾಗಿರುವ ಪದ

(ಎ) ರಾಜೇಂದ್ರ

(ಬಿ) ಮರವನ್ನು

(ಸಿ) ಮಳೆಗಾಲ

(ಡಿ) ಹಿಮಾಲಯ

2. 'ಅನ್ವರ್ಥನಾಮ' ಪದವಿದು

(ಎ) ಕೆರೆ

(ಬಿ) ಬೆಟ್ಟ

(ಸಿ) ಶಿಕ್ಷಕ

(ಡಿ) ಮರ

3. 'ಪ್ರಥಮಾ ವಿಭಕ್ತಿ' ಪ್ರತ್ಯಯವಿದು

(ಎ) ಅಲ್ಲಿ

(ಬಿ) ಉ

(ಸಿ) ಇಂದ

(ಡಿ) ಅನ್ನು

4. 'ಮರಗಾಲು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ

(ಎ) ತತ್ಪುರುಷ ಸಮಾಸ

(ಬಿ) ಕರ್ಮಧಾರಯ ಸಮಾಸ

(ಸಿ) ಅಂಶಿ ಸಮಾಸ

(ಡಿ) ಕ್ರಿಯಾ ಸಮಾಸ

**II. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ :** **12 × 1 = 12**

5. ಬೇಡನು ಪ್ರಾಣಿಗಳನ್ನು ಕೊಲ್ಲಲು ಮಾಡುತ್ತಿದ್ದ ಉಪಾಯವೇನು ?

6. ಸರ್ವಜ್ಞ ಹೇಳಿರುವಂತೆ ಕೋಟಿ ವಿದ್ಯೆಗಳಿಗಿಂತ ಮಿಗಿಲಾದ ವಿದ್ಯೆ ಯಾವುದು ?

7. ಪುಟ್ಟರಾಜರು ಖಾದಿ ಬಟ್ಟೆ ತೊಡಲು ನಿರ್ಧರಿಸಿದ್ದು ಏಕೆ ?

8. ಹಕ್ಕಿಗಳು ಗೂಡು ಕಟ್ಟುವ ಸಾಮರ್ಥ್ಯಕ್ಕೆ ಮಿತಿಯೊಡ್ಡುವ ಅಂಶಗಳಾವುವು ?

9. ಹಕ್ಕಿಗೂಡಿನಲ್ಲಿ ಯಾವುದರ ಸಮನ್ವಯತೆ ಇದೆ ?

10. ಗೋಪಾಲನ ಬೆಳಗಿನ ಮುಖ್ಯ ಕೆಲಸ ಯಾವುದಾಗಿತ್ತು ?

11. ಕವಿ ಡಾ. ಬಸವರಾಜ ಸಬರದ ಅವರ ಪ್ರಕಾರ ಕಾಡನ್ನು ಅಲೆದ ಸಿದ್ಧಾರ್ಥನಿಗೆ ಹೊಳೆದುದ್ದೇನು ?

12. ತಿಮಿರಕ್ಕೆ ವೈರಿ ಯಾವುದು ?

13. ಅಡಿಗರು ಹಗಲಿರುಳು ಯಾವುದಕ್ಕೆ ಹೋರಾಡಬೇಕೆಂದು ಹೇಳುತ್ತಾರೆ ?

14. ಜನಪದರು ತುಂಬಿದ ಕುಣಿಗಲ್ ಕೆರೆಯನ್ನು ಯಾವುದಕ್ಕೆ ಹೋಲಿಸಿದ್ದಾರೆ ?

15. ಅಕ್ಕಮಹಾದೇವಿಯ ಪ್ರಕಾರ ಧನವಿದ್ದವರಲ್ಲಿ ಇರಬೇಕಾದ ಗುಣ ಯಾವುದು ?

16. ಅರ್ಜುನ ಉತ್ತರಕುಮಾರನಿಗೆ ಧುರಕೆ ಬೆನ್ನುಹಾಕಿದರೆ ಏನು ಪ್ರಾಪ್ತಿಯಾಗುತ್ತದೆ ಎಂದನು ?

**III. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : $8 \times 2 = 16$**

17. ಮರವನ್ನು ಬಿಟ್ಟು ಹೋಗದೆ ಇರಲು ಗಿಳಿಯು ನೀಡಿದ ಸಮರ್ಥನೆ ಏನು ?

18. ಬಾಲಕ ಪುಟ್ಟಯ್ಯ ಕಣ್ಣುಗಳನ್ನು ಕಳೆದುಕೊಂಡದ್ದು ಹೇಗೆ ?

19. ಪುಟ್ಟರಾಜರ ವೇಷಭೂಷಣಗಳು ಹೇಗಿದ್ದವು ?

20. ಹಕ್ಕಿಗಳು ಬದಲಾದ ಪರಿಸರಕ್ಕೆ ಹೊಂದಿಕೊಂಡು ಗೂಡುಕಟ್ಟುವುದಕ್ಕೆ ಲೇಖಕರು ಯಾವ ಉದಾಹರಣೆಗಳನ್ನು ನೀಡುತ್ತಾರೆ ? ತಿಳಿಸಿ.

21. ಹಕ್ಕಿಗಳು ಗೂಡನ್ನು ಯಾವ ರೀತಿಯಲ್ಲಿ ಅಲಂಕರಿಸುತ್ತವೆ ?

22. ಬಸವಣ್ಣನವರು ಜನರ ಮೌಢ್ಯತೆಯನ್ನು ಯಾವ ರೀತಿ ಖಂಡಿಸಿದ್ದಾರೆ ಎಂಬುದನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

23. ವೈದ್ಯರು ಭೀಮನಾಯಕನ ಮಗುವಿನ ಪ್ರಾಣವನ್ನು ಹೇಗೆ ಉಳಿಸಿದರು ಎಂಬುದನ್ನು ವಿವರಿಸಿ.

24. ವೈದ್ಯರು ತನ್ನ ವೃತ್ತಿಯನ್ನು ಕುರಿತು ಹೆಂಡತಿ ರತ್ನಳಿಗೆ ಹೇಳಿದ ಅಭಿಮಾನದ ಮಾತುಗಳನ್ನು ತಿಳಿಸಿ.

**IV. ಕೆಳಗಿನ ಕವಿ / ಸಾಹಿತಿಯ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** **1 × 3 = 3**

25. ಕುಮಾರವ್ಯಾಸ

**V. ಕೆಳಗಿನ ಪದ್ಯದ ಸಾರಾಂಶವನ್ನು ವಾಕ್ಯರೂಪದಲ್ಲಿ ಬರೆಯಿರಿ :** **1 × 3 = 3**

26. ಹಸಿಸೌದೆ ಬುಸುಗುಟ್ಟಿ ದನಿಯನೆತ್ತುವುದಲ್ತೆ
ಕಿಡಿ ಸೋಕೆ ಮದ್ದು ಸಿಡಿದಬ್ಬರಿಪುದು
ಅಂತಿರದೆ ರವಿಕರಕೆ ಕರಗುವಿಬ್ಬನಿವೊಲಿರು;
ಸಿಡುಕು ಮಿಡುಕನು ತೊರೆದು ಮೌನಿಯಾಗು !

**VI. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** **1 × 3 = 3**

27. "ಮಗುವಿನ ಮುಖವು ಚಂದ್ರನಂತೆ ಮನೋಹರವಾಗಿದೆ."

**VII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ : 1 × 3 = 3**

28. "ಗಿಡವಾಗಿ ಬಗ್ಗದ್ದು ; ಮರವಾಗಿ ಬಗ್ಗೀತೆ."

**ಅಥವಾ**

"ಶಕ್ತಿಗಿಂತ ಯುಕ್ತಿ ಮೇಲು."

**VIII. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 5 × 3 = 15**

29. "ಅದರ ಈಗಿನ ಅವಸ್ಥೆಯನ್ನು ನಾನು ನೋಡಲಾರೆ."

30. "ಪೆನ್ನು ಖಡ್ಗಕ್ಕಿಂತ ಹರಿತ."

31. "ಗೊತ್ತು ಗುರಿ ಇಲ್ಲದೆ ಕತ್ತಲಲ್ಲಿ ನಡೆದನು."

32. "ಒಂದು ಜೀವನಕೇಕೆ ಹಲವು ಸಾಧ್ಯಗಳು ?"

33. "ಬೊಬ್ಬೆ ಹೊಡೆದಾವೆ ಬಾಳೆಮೀನು."

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** **1 × 4 = 4**

34. ಕೊರಡ ಕೊನರಿಸಿ ..............................................

.................................................................

.................................................................

.................................................. ಮತ್ತೇರಿದೆ.

**ಅಥವಾ**

ಯುಗದ ಹಿಂದಿನ .............................................

.................................................................

.................................................................

................................................. ಸವಿಚೈತ್ರವು.

**X. ಕೆಳಗಿನ ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** **1 × 4 = 4**

35. ಗೋಪಾಲ ಮತ್ತು ಬನದ ಗೋಪಾಲನ ನಡುವೆ ನಡೆದ ಸಂಭಾಷಣೆಯ ಸ್ವಾರಸ್ಯವನ್ನು ನೀವು ಮೆಚ್ಚುವ ಮಾತುಗಳಲ್ಲಿ ಬರೆಯಿರಿ.

**ಅಥವಾ**

ಗೋಪಾಲನು ತನ್ನ ತಾಯಿಯೊಂದಿಗೆ ನಡೆಸಿದ ಸಂಭಾಷಣೆಯ ಸಾರವನ್ನು ನಿಮ್ಮ ಮಾತುಗಳಲ್ಲಿ ವಿವರಿಸಿ.

**XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :**

**1 × 4 = 4 ( 2 + 2 )**

36. "ಪುಸ್ತಕಗಳು ಜ್ಞಾನ ಭಂಡಾರದ ಕೀಲಿಕೈ ಇದ್ದಂತೆ" ಎಂಬ ಮಾತು ಹಳೆಯದಾದರೂ ಅದು ಚಿರಂತನ ಸತ್ಯ. ಜಗತ್ತಿನ ಎಲ್ಲಾ ಕಾಲದ ಜ್ಞಾನಿಗಳು ತಮ್ಮ ಸಮಸ್ತ ಜ್ಞಾನವನ್ನು ಪುಸ್ತಕದ ರೂಪದಲ್ಲಿ ತಮ್ಮ ಹಾಗೂ ಮುಂದಿನ ಪೀಳಿಗೆಗೆ ಬಳುವಳಿಯಾಗಿ ಕೊಟ್ಟುಹೋಗಿರುತ್ತಾರೆ. ಎಲ್ಲರಿಗೂ ಎಲ್ಲಾ ಸಂದರ್ಭಗಳಲ್ಲೂ ನಿಲುಕಬಹುದಾದ ಅಮೂಲ್ಯ ಸಂಪತ್ತು ಇದು. ಈ ನಿಧಿಯ ಮೌಲ್ಯದ ಅರಿವು ಇದ್ದವರು ಅದನ್ನು ಬಾಚಿ ಬಳಿದುಕೊಂಡು ತಮ್ಮ ಅರಿವಿನ ಪರಧಿಯನ್ನು ವಿಸ್ತರಿಸಿ ಕೊಳ್ಳುತ್ತಲೇ ಬಂದಿದ್ದಾರೆ. ಬೊಗಸೆಗಟ್ಟಲೆ ತುಂಬಿಕೊಂಡು ಎಷ್ಟು ಸವಿದರೂ ಎಂದು ಮುಗಿಯದ ಆಳವಾದ ಸಿಹಿನೀರಿನ ಕೊಳಗಳು ಈ ಪುಸ್ತಕಗಳು. ಅಜ್ಞರಿಗೆ ಪುಸ್ತಕಗಳಲ್ಲಿ ಅಡಗಿದ ನಿಧಿಯ ಅರಿವು ಇರುವುದಿಲ್ಲ. ತಾತ್ಕಾಲಿಕ ಸುಖ ಕೊಡುವಂತಹ ಹಣ, ವೈಭವ, ಅಂತಸ್ತು, ಕೀರ್ತಿ, ಅಧಿಕಾರ ಇತ್ಯಾದಿ ಅರ್ಥಹೀನ ಪ್ರಲೋಭನೆಗಳನ್ನು ಅವರು ಬೆನ್ನಟ್ಟುತ್ತಾರೆ. ಒಂದು ಒಳ್ಳೆಯ ಪುಸ್ತಕವು ಕಷ್ಟಕಾಲದಲ್ಲಿ ಸ್ನೇಹಿತನಾಗುತ್ತದೆ, ಸಮಸ್ಯೆಗಳಿಗೆ ಪರಿಹಾರ ಹೇಳುತ್ತದೆ. ಏಕಾಕಿತನದ ಭಾರವನ್ನು ಗಣನೀಯವಾಗಿ ಕಡಿಮೆ ಮಾಡುತ್ತದೆ. ಎಲ್ಲಕ್ಕಿಂತ ಹೆಚ್ಚಾಗಿ ಅದು ಎಂತಹ ಆಳವಾದ ದುಃಖವನ್ನೂ ಮರೆಯಲು ಸಹಾಯ ಮಾಡುತ್ತದೆ. ಪುಸ್ತಕಗಳಿಂದ ಈ ಎಲ್ಲಾ ಲಾಭಗಳನ್ನು ಹೊಂದಬೇಕಾದಲ್ಲಿ ವ್ಯಕ್ತಿ

ಒಬ್ಬ ಸಹೃದಯಿಯಾಗಿರುವುದು ಅವಶ್ಯ. ಜೀವನದ ಬಗ್ಗೆ ರಚನಾತ್ಮಕ ದೃಷ್ಟಿಯುಳ್ಳ ಮೌಲ್ಯಗಳನ್ನು ಗೌರವಿಸುವ, ಒಳ್ಳೆಯದನ್ನು ಮತ್ತು ಸುಂದರವಾದುದನ್ನು ಪ್ರೀತಿಸುವ ಮನಸ್ಸು ಹಾಗೂ ಹೃದಯ ವ್ಯಕ್ತಿಗೆ ಇರಬೇಕು. ಅಂದಾಗಲೇ ಆತ ಪುಸ್ತಕಗಳನ್ನು ಓದುವ ಹಾಗೂ ಪ್ರೀತಿಸುವ ಮತ್ತು ಅವುಗಳಿಂದ ವ್ಯಕ್ತಿತ್ವವನ್ನು ಉನ್ನತಗೊಳಿಸಿಕೊಳ್ಳುವ ಸಾಧ್ಯತೆ ಇರುತ್ತದೆ.

***ಪ್ರಶ್ನೆಗಳು :***

ಅ) ಒಂದು ಒಳ್ಳೆಯ ಪುಸ್ತಕದಿಂದಾಗುವ ಪ್ರಯೋಜನಗಳೇನು ?

ಆ) ನಮ್ಮ ಅರಿವಿನ ಪರಧಿಯನ್ನು ವಿಸ್ತರಿಸಿಕೊಳ್ಳುವುದು ಹೇಗೆ ? ತಿಳಿಸಿ.

**XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧ ಬರೆಯಿರಿ : 1 × 4 = 4**

37. "ರಾಷ್ಟ್ರೀಯ ಹಬ್ಬಗಳ ಮಹತ್ವ."

**ಅಥವಾ**

"ಇಂದಿನ ದಿನಗಳಲ್ಲಿ ಮಣ್ಣಿನ ಸಂರಕ್ಷಣೆಯ ಅಗತ್ಯತೆ."

**XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

38. ನಿಮ್ಮನ್ನು ಮಂಡ್ಯದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ಧನ್ವೀರ್' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸುವ 'ವನಮಹೋತ್ಸವ' ಕಾರ್ಯಕ್ರಮಕ್ಕೆ ಸಸಿಗಳನ್ನು ನೀಡುವಂತೆ ಕೋರಿ ಅರಣ್ಯ ಇಲಾಖೆಯ ಅರಣ್ಯಾಧಿಕಾರಿಗಳಿಗೆ ಒಂದು ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ತುಮಕೂರಿನ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ 'ಸುಮ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆಯುವ 'ಪೋಷಕರ ಸಭೆ'ಗೆ ಬರುವಂತೆ ಕುಣಿಗಲ್‌ನ ಬನಶಂಕರಿ ನಗರದ ನಿವಾಸಿಯಾದ 'ಗಂಗಾಧರ' ಎಂಬ ಹೆಸರಿನ ತಂದೆಯವರಿಗೊಂದು ಪತ್ರವನ್ನು ಬರೆಯಿರಿ.

DO NOT WRITE ANYTHING HERE